ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಎಲೆಕ್ಟ್ರಿಕಲ್ ಬಸ್ ಖರೀದಿಯ ಅಥವಾ ಗುತ್ತಿಗೆ ಮೇಲೆ ತೆಗೆದುಕೊಳ್ಳುವ ಬಗ್ಗೆ

ಶ್ರೀ ಕಾಂತರಾಜ್ (ಬಿ.ಎಂ.ಎಲ್.)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1356 (1591) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಾಯು ಮಾಲಿನ್ಯವನ್ನು ತಡೆಗಟ್ಟುವ ಹಿನ್ನಲೆಯಲ್ಲಿ ಈ ಹಿಂದೆ ಎಲೆಕ್ಟ್ರಿಕ್ ಬಸ್‌ಗಳನ್ನು ಕೆ.ಎಸ್.ಆರ್.ಟಿ.ಸಿ/ಬಿ.ಎಂ.ಟಿ.ಸಿ ಗೆ ಗುತ್ತಿಗೆ ಆಧಾರದ ಮೇಲೆ ಅಥವಾ ಖರೀದಿಗಾಗಿ ತೆಗೆದುಕೊಳ್ಳಲು ಸರ್ಕಾರ ತೀರ್ಮಾನ ಕೈಗೊಂಡಿದೆಯೇ ;

(ಆ) ಹಾಗಿದ್ದಲ್ಲಿ, ಈ ಪ್ರಸ್ತಾವನೆಯು ಯಾವ ಹಂತದಲ್ಲಿ ಇದೆ ; ಇಷ್ಟೊಂದು ವಿಳಂಬವಾಗಲು ಕಾರಣಗಳೇನು ; (ವಿವರ ನೀಡುವುದು)

(ಇ) ಅಲ್ಲದೆ, ಈ ಎಲೆಕ್ಟ್ರಿಕ್ ಬಸ್‌ಗಳಿಗೆ ಕೇಂದ್ರ ಸರ್ಕಾರ ಸಹಾಯಧನ ನೀಡಿದ್ದರು ಸಹ ಈ ಸಹಾಯಧನವನ್ನು ಬಳಸಿಕೊಳ್ಳದೆ ವಿಳಂಬ ಧೋರಣೆಯಿಂದ ಕೇಂದ್ರ ಸರ್ಕಾರದ ಸಹಾಯಧನ ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ವಿಳಂಬ ಧೋರಣೆಗೆ ಕಾರಣರಾದ ಅಧಿಕಾರಿ ಯಾರು; ಆ ಅಧಿಕಾರಿಯ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮವೇನು ? (ವಿವರ ನೀಡುವುದು)